**ಕರ್ನಾಟಕ ಸರ್ಕಾರ**

ಸಂಖ್ಯೆ: ಇಡಿ 160 ಟಿಇಸಿ 2025

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಡಾ|| ಬಿ.ಆರ್. ಅಂಬೇಡ್ಕರ್ ವೀದಿ
ಬೆಂಗಳೂರು, ದಿನಾಂಕ:16.09.2025.

ಇವರಿಂದ:-
ಸರ್ಕಾರದ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು-560001.

ಇವರಿಗೆ:-
ಕುಲಸಚಿವರು,
ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ,
ಜ್ಞಾನಸಂಗಮ, ಬೆಳಗಾವಿ.

ಮಾನ್ಯರೇ,

**ವಿಷಯ:** Rathinam Institute of Technology, Bengaluru ಈ ಕಾಲೇಜಿನಲ್ಲಿ 2025-26ನೇ ಶೈಕ್ಷಣಿಕ ಸಾಲಿನಿಂದ ಸ್ನಾತಕ ಕೋರ್ಸುಗಳನ್ನು ಹೊಸದಾಗಿ ಪ್ರಾರಂಭಿಸಲು ಸಂಯೋಜನೆ ನೀಡುವ ಬಗ್ಗೆ.

**ಉಲ್ಲೇಖ:** 1.ಪ್ರಾಂಶುಪಾಲರು, Rathinam Institute of Technology, Bengaluru ರವರ ಪತ್ರ ಸಂಖ್ಯೆ:RIT/GOVT/2025-26/032, ದಿನಾಂಕ:26.06.2025.
2. ಸರ್ಕಾರದ ನಿರಾಕ್ಷೇಪಣಾ ಪ್ರಮಾಣ ಪತ್ರ ಸಂಖ್ಯೆ: ಇಡಿ 160 ಟಿಇಸಿ 2025, ದಿನಾಂಕ:25.06.2025.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ (1)ರ ಪತ್ರದಲ್ಲಿ Rathinam Institute of Technology, Bengaluru ಈ ಕಾಲೇಜಿನಲ್ಲಿ 2025-26ನೇ ಶೈಕ್ಷಣಿಕ ಸಾಲಿನಿಂದ ಸ್ನಾತಕ ಕೋರ್ಸುಗಳನ್ನು ವಿದ್ಯಾರ್ಥಿ ಪ್ರಮಾಣದೊಂದಿಗೆ(ಇನ್‌ಟೇಕ್) ಹೊಸದಾಗಿ ಪ್ರಾರಂಭಿಸಲು ಸಂಯೋಜನೆ ಕೋರಿ ಸಲ್ಲಿಸಿರುವ ಪತ್ರ/ಅರ್ಜಿಯನ್ನು ಪರಿಶೀಲಿಸಲಾಯಿತು.

ಉಲ್ಲೇಖಿತ (2)ರ ಪತ್ರದಲ್ಲಿ Rathinam Institute of Technology, Bengaluru ಈ ಕಾಲೇಜನ್ನು ಹೊಸದಾಗಿ ಪ್ರಾರಂಭಿಸಲು ಸರ್ಕಾರದಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ನೀಡಲಾಗಿರುತ್ತದೆ.

ಆದ್ದರಿಂದ, Rathinam Institute of Technology, Bengaluru ಈ ಕಾಲೇಜಿನಲ್ಲಿ 2025-26ನೇ ಶೈಕ್ಷಣಿಕ ಸಾಲಿನಿಂದ ಈ ಕೆಳಕಂಡ ಸ್ನಾತಕ ಕೋರ್ಸುಗಳನ್ನು ವಿದ್ಯಾರ್ಥಿ ಪ್ರಮಾಣದೊಂದಿಗೆ(ಇನ್‌ಟೇಕ್) ಹೊಸದಾಗಿ ಪ್ರಾರಂಭಿಸಲು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಸ್ಥಳೀಯ ವಿಚಾರಣಾ ಸಮಿತಿಯು ನೀಡಿರುವ ಸ್ಥಳೀಯ ವಿಚಾರಣಾ ವರದಿಗೆ ಅಕಾಡೆಮಿಕ್ ಸೆನೆಟ್ ಮತ್ತು ಕಾರ್ಯಕಾರಿ ಮಂಡಳಿ ಶಿಫಾರಸ್ಸು ಮಾಡಿರುವುದಾಗಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯವು ಸಲ್ಲಿಸಿರುವ ವರದಿ ಹಾಗೂ ಎಐಸಿಟಿಇಯ ಅನುಮೋದನೆಯ ಹಿನ್ನೆಲೆಯಲ್ಲಿ ಸಂವೀಕ್ಷಿಸಲಾಗಿದೆ.

| ಕಾಲೇಜಿನ ಹೆಸರು | ಸ್ನಾತಕ ಕೋರ್ಸುಗಳು | ಇನ್‌ಟೇಕ್ / ವಿದ್ಯಾರ್ಥಿ ಪ್ರಮಾಣ |
|---|---|---|
| Rathinam Institute of Technology, Survey No.137, Doddakamanahalli, Begur Hobli, Bengaluru South – 560076. | Computer Science & Engineering - UG | 60 |
| | Computer Science and Engineering - (Artificial Intelligence and Machine Learning) - UG | 60 |
| | Computer Science and Engineering (Cyber Security) - UG | 60 |
| | Computer Science and Engineering (Data Science) - UG | 60 |
| | Electronic & Communication Engineering (Industry Integrated) - UG | 60 |
| | Information Science & Engineering | 60 |

ಅದರಂತೆ, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಅಧಿನಿಯಮ 1994ರ ಚಾಪ್ಟರ್ X ನಿಯಮ 40ರಲ್ಲಿ ನೀಡಿರುವ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, Rathinam Institute of Technology, Bengaluru ಕಾಲೇಜಿನಲ್ಲಿ 2025-26ನೇ ಶೈಕ್ಷಣಿಕ ಸಾಲಿನಿಂದ ಮೇಲ್ಕಂಡ ಕೋಷ್ಟಕದಲ್ಲಿ ನಿರ್ದಿಷ್ಟಪಡಿಸಿರುವ ಕೋರ್ಸುಗಳು ಹಾಗೂ ವಿದ್ಯಾರ್ಥಿ ಪ್ರಮಾಣದೊಂದಿಗೆ ಹೊಸದಾಗಿ ಪ್ರಾರಂಭಿಸಲು ಕೆಳಕಂಡ ಷರತ್ತುಗಳಿಗೊಳಪಟ್ಟು ಸಂಯೋಜನೆ (Affiliation)ಗೆ ಸರ್ಕಾರದ ಅನುಮೋದನೆ ನೀಡಲಾಗಿದೆ ಎಂದು ತಿಳಿಸಲು ನಿರ್ದೇಶಿತನಾಗಿದ್ದೇನೆ.

**ಷರತ್ತುಗಳು:-**

1. ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ, ಅದನ್ನು ಶಾಶ್ವತ ಅನುದಾನರಹಿತ ಕೋರ್ಸುಗಳೆಂದು ಪರಿಗಣಿಸತಕ್ಕದ್ದು;
2. ಸದರಿ ಕಾಲೇಜುಗಳು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;
3. ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;
4. ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;
5. ಸ್ಥಳೀಯ ವಿಚಾರಣಾ ಸಮಿತಿ, ಎ.ಐ.ಸಿ.ಟಿ.ಇ ರವರು ವಿಧಿಸಿರುವ ಪ್ರತಿಯೊಂದು ಷರತ್ತುಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
6. ಆಡಳಿತ ಮಂಡಳಿಯು ಕಾಲಕಾಲಕ್ಕೆ ಸರ್ಕಾರವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ಸರ್ಕಾರವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.
7. ದಿನಾಂಕ:13.08.1997ರಂದು ವಿಶಾಖ ವಿರುದ್ಧ ರಾಜಸ್ತಾನ ಸರ್ಕಾರ ಮೊಕದ್ದಮೆಯಲ್ಲಿ ಸುಪ್ರೀಂ ಕೋರ್ಟ್ ನೀಡಿರುವ ತೀರ್ಪಿನ ಅನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯ ಮೇಲೆ ಲೈಂಗಿಕ

ಕಿರುಕುಳ ನೀಡಿದ್ದಲ್ಲಿ ಅದು ಸಂಜ್ಞೆಯ ಅಪರಾಧ (Cognizable offense) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;

8. ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಳಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು.

9. ಕಾಲೇಜಿನ ಆಡಳಿತ ಮಂಡಳಿಯು ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ, ಇವರೆಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆ ಹಿಡಿಯತಕ್ಕದ್ದಲ್ಲ;

10. ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ.

11. ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ.

12. ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

13. ಇನ್ನು ಮುಂದೆ ಯಾವುದೇ ಹೊಸ ಕೋರ್ಸನ್ನು ಪ್ರಾರಂಭಿಸಿದ್ದಲ್ಲಿ, ಇಲ್ಲವೇ ವಿದ್ಯಾರ್ಥಿ ಪ್ರಮಾಣವನ್ನು ಹೆಚ್ಚಿಸಿಕೊಂಡಲ್ಲಿ, ಆಯಾಯ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರದಿಂದ ಸಂಯೋಜನೆಯ ಆದೇಶವನ್ನು ತಪ್ಪದೇ ಪಡೆಯತಕ್ಕದ್ದು.

14. ದಿನಾಂಕ:03.08.2023ರ ಸುತ್ತೋಲೆಯಲ್ಲಿ ತಿಳಿಸಿರುವಂತೆ, NBC ನಿಯಮಾವಳಿಯನ್ವಯ ಕಟ್ಟಡ ಸುರಕ್ಷಾ ಮತ್ತು ಅಗ್ನಿಶಾಮಕ ಸುರಕ್ಷಾ ಮಾನದಂಡಗಳನ್ನುಕಡ್ಡಾಯವಾಗಿ ಪಾಲಿಸುವುದು.

ತಮ್ಮ ನಂಬುಗೆಯ

16/09/2025

**(ಎನ್. ಕುಮಾರ್)**
ಸರ್ಕಾರದ ಉಪ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ
(ತಾಂತ್ರಿಕ ಶಿಕ್ಷಣ & ಯೋಜನೆ)

**ಪ್ರತಿ:**

1. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
2. ನಿರ್ದೇಶಕರು, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
3. ಪ್ರಾಂಶುಪಾಲರು, Rathinam Institute of Technology, Survey No.137, Doddakamanahalli, Begur Hobli, Bengaluru South – 560076.